(ii) ೨೫ ಕೆ.ವಿ.ಎ. ಟ್ರಾನ್ಸ್‌ಫಾರ್ಮರ್‌ಗಳ ತಯಾರಿಕೆಯನ್ನು ನಿಲ್ಲಿಸಿರುವುದರಿಂದ ತೊಂದರೆಯುಂಟಾಗಿರುವ ಬಗ್ಗೆ

ಶ್ರೀ ಸಿ.ಎಂ. ಉದಾಸಿ.—ಸನ್ಮಾನ್ಯ ಅಧ್ಯಕ್ಷರೇ–೨೫ ಕಿಲೋವ್ಯಾಟ್ ಟ್ರಾನ್ಸ್‌ಫಾರ್ಮರ್ಸ್‌ಗಳ ತಯಾರಿಕೆಯನ್ನು ನಿಲ್ಲಿಸಿರುವುದರಿಂದ, ಪಂಪು ಸೆಟ್ಟುಗಳಿಗೆ ವಿದ್ಯುಚ್ಛಕ್ತಿಯನ್ನೊದಗಿಸುವಲ್ಲಿ ತಡವಾಗುತ್ತಿರುವ ಬಗ್ಗೆ ವಿದ್ಯುತ್ ಗಣಿ ಹಾಗೂ ಭೂ ವಿಜ್ಞಾನ ಮಂತ್ರಿಗಳ ಗಮನಕ್ಕೆ ಈ ವಿಷಯವನ್ನು ತರುವುದಕ್ಕೆ ಇಚ್ಛಿಪಡುತ್ತೇನೆ.

ಶ್ರೀ ವಿ.ಬಿ. ದೇಶಮುಖ್ (ಗಣಿ ಹಾಗೂ ಭೂ ವಿಜ್ಞಾನ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ಮುಖ್ಯವಾಗಿ ಎರಡು ಕಾರಣಗಳಿಂದಾಗಿ ೨೫ ಕೆ.ವಿ.ಎ. ಟ್ರಾನ್ಸ್‌ಫಾರ್ಮರ್‌ಗಳ ಲಭ್ಯತೆಯು ತಾತ್ಕಾಲಿಕವಾಗಿ ತೊಂದರೆಗೆ ಒಳಗಾಗಿದೆ. ಮತ್ತು ಈ ಕಾರಣಗಳಿಗಾಗಿ ತಾತ್ಕಾಲಿಕವಾಗಿ ನೀರಾವರಿ ಪಂಪುಗಳಿಗೆ ವಿದ್ಯುಚ್ಛಕ್ತಿ ಹೊಸದಾಗಿ ಜೋಡಣೆಯು ಕುಂಠಿತಗೊಂಡಿರುವುದು ನಿಜವಿದೆ.

ಕಚ್ಚಾ ವಸ್ತುಗಳು ಸರಿಯಾಗಿ ಸರಬರಾಜಾಗದೇ ಇರುವುದರಿಂದ ನಮಗೆ ಟ್ರಾನ್ಸ್‌ಫಾರ್ಮರ್‌ಗಳನ್ನು ಹೆಚ್ಚಿನ ಪ್ರಮಾಣದಿಂದ ಸರಬರಾಜು ಮಾಡುತ್ತಿರುವ ಮೆಸರ್ಸ್ ಕರ್ನಾಟಕ ವಿದ್ಯುಚ್ಛಕ್ತಿ ಕಾರ್ಖಾನೆ ಇವರು ಟ್ರಾನ್ಸ್‌ಫಾರ್ಮರ್‌ಗಳನ್ನು ಸಮಯಕ್ಕೆ ಸರಿಯಾಗಿ ಸರಬರಾಜು ಮಾಡಲಿಲ್ಲ. ಈ ತೊಂದರೆಯನ್ನು ನಿವಾರಿಸಲು ಹೊರ ರಾಜ್ಯದಲ್ಲಿರುವ ಸರಬರಾಜುದಾರರಿಗೂ ಸಹಾ ಸರಬರಾಜು ಮಾಡಲು ಬೇಡಿಕೆಯನ್ನು ಅಂತರ ರಾಷ್ಟ್ರೀಯ ಗ್ರಾಮೀಣ ಪುನರುಜ್ಜೀವನ ಮತ್ತು ಅಭಿವೃದ್ಧಿ ಬ್ಯಾಂಕ್ (ಐ.ಬಿ.ಆರ್.ಡಿ.) ಯೋಜನೆ ಕೆಳಗೆ ಮಾಡಲಾಯಿತು. ಈ ಸರಬರಾಜುದಾರರೂ ಸಹಾ ನಿಗದಿಪಡಿಸಿದ ಸಮಯದೊಳಗೆ ಟ್ರಾನ್ಸ್‌ಫಾರ್ಮರ್‌ಗಳನ್ನು ಸರಬರಾಜು ಮಾಡುವಲ್ಲಿ ವಿಫಲರಾದರು.

ಟ್ರಾನ್ಸ್‌ಫಾರ್ಮರ್‌ಗಳ ಲಭ್ಯತೆಯನ್ನು ಸುಧಾರಿಸಲು ಸಾಧ್ಯವಾದ ಎಲ್ಲಾ ಪ್ರಯತ್ನಗಳನ್ನು ಮಾಡಲಾಗಿದೆ. ಹಾಳಾದ ಟ್ರಾನ್ಸ್‌ಫಾರ್ಮರ್‌ಗಳನ್ನು ದುರಸ್ತಿಗೊಳಿಸುವ ಕೆಲಸವನ್ನು ತ್ವರಿತಗೊಳಿಸಲಾಗಿರುತ್ತೆ ಮತ್ತು ಅತೀ ಹೆಚ್ಚಿನ ಸಂಖ್ಯೆಯಲ್ಲಿ ಹಾಳಾದ ಟ್ರಾನ್ಸ್‌ಫಾರ್ಮರ್‌ಗಳನ್ನು ದುರಸ್ತಿಗೊಳಿಸುವ ಕೆಲಸ ಈಗ ನಡೆದಿರುತ್ತದೆ. ಇದಲ್ಲದೆ ಸೆಪ್ಟೆಂಬರ್ ೧೯೮೫ರಿಂದ ಟ್ರಾನ್ಸ್‌ಫಾರ್ಮರ್‌ಗಳನ್ನು ಸರಬರಾಜು ಮಾಡಲು ಒಪ್ಪಿಕೊಂಡಿರುವ ಒಂದು ಕೇರಳದ ಸರ್ಕಾರಿ ಸಾಮ್ಯದ ಸಂಸ್ಥೆಗೂ ಸಹಾ ಟ್ರಾನ್ಸ್‌ಫಾರ್ಮರ್‌ಗಳನ್ನು ಸರಬರಾಜು ಮಾಡಲು ಆದೇಶವನ್ನು ಕೊಡಲಾಗಿದೆ.

ಇನ್ನೂ ಒಂದೆರಡು ತಿಂಗಳಲ್ಲಿ ಟ್ರಾನ್ಸ್‌ಫಾರ್ಮರ್‌ಗಳನ್ನು ಲಭ್ಯತೆಯ ಪರಿಸ್ಥಿತಿಯು ಉತ್ತಮಗೊಳ್ಳುವ ನಿರೀಕ್ಷೆಯಿದೆ.

ಇನ್ನೊಂದೆರಡು ತಿಂಗಳಲ್ಲಿ ೨೫ ಕೆ.ವಿ.ಎ. ಟ್ರಾನ್ಸ್‌ಫಾರ್ಮರ್‌ಗಳ ಕೊರತೆಯಿಂದ ನೀರಾವರಿ ಪಂಪುಗಳಿಗೆ ವಿದ್ಯುಚ್ಛಕ್ತಿ ಸರಬರಾಜು ಮಾಡುವಲ್ಲಿ ಆಗಬಹುದಾದ ತಡವು ನಿವಾರಣೆಯಾಗುವುದರಲ್ಲಿ ಸಂಶಯವಿರುವುದಿಲ್ಲ.

ಈಗಾಗಲೇ ಕೆಲವು ಸ್ಥಳಗಳಲ್ಲಿ ಟ್ರಾನ್ಸ್‌ಫಾರ್ಮರ್‌ಗಳ ಕೊರತೆಯಿಂದಾಗಿ ಆಗಬಹುದಾದ ತೊಂದರೆಯನ್ನು ನಿವಾರಿಸಲು ಲಭ್ಯವಿರುವ ೬೩ ಕೆ.ವಿ.ಎ. ಟ್ರಾನ್ಸ್‌ಫಾರ್ಮರ್‌ಗಳನ್ನು ಉಪಯೋಗಿಸಲಾಗುತ್ತಿದೆ.

ಶ್ರೀ ಸಿ.ಎಂ. ಉದಾಸಿ.—ಮಾನ್ಯ ವಿದ್ಯುಚ್ಛಕ್ತಿ ಸಚಿವರು ೬೩ ಕಿಲೋವ್ಯಾಟ್ ಟ್ರಾನ್ಸ್‌ಫಾರ್ಮರ್‌ಗಳನ್ನು ಕೊಡುತ್ತೇವೆಂದು ಹೇಳಿದ್ದಾರೆ. ಕಳೆದ ೯ ತಿಂಗಳಿಂದ ೬೯ ನೀರಿನ ಪಂಪ್ ಸೆಟ್‌ಗಳಿಗೆ ವಿದ್ಯುತ್ ಜೋಡಣೆ ಮಾಡುವ ಕೆಲಸ ನಡೆದಿದೆ, ಇದರ ಬಗ್ಗೆ ಸೂಕ್ತವಾದ ಕ್ರಮ ತೆಗೆದುಕೊಳ್ಳಬೇಕೆಂದು ನಾನು ಮಂತ್ರಿಯವರನ್ನು ಕೇಳಿಕೊಳ್ಳುತ್ತೇನೆ. ಯಾವ ಯಾವ ಹಳ್ಳಿಗಳಲ್ಲಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಜೋಡಣೆಯಾಗಿದೆಯೆಂಬುದು ಗೊತ್ತಿಲ್ಲ.

ಶ್ರೀ ವಿ.ಬಿ. ದೇಶಮುಖ್.—ಆಗಬಹುದು.